ಶ್ರೀ ಎಂ. ರಘುಪತಿ (ಶಿಕ್ಷಣ ಸಚಿವರು).—ಮಾನ್ಯ ಅಧ್ಯಕ್ಷರೇ, ಗ್ರಂಥಾಲಯ ಇಲಾಖೆಯಲ್ಲಿ ಭರ್ತಿ ಮಾಡುವ ಸಲುವಾಗಿ ವಿಷಯ ಪ್ರಸ್ತಾಪ ಮಾಡಿದ್ದಾರೆ. ನಿಯಮಾವಳಿಗಳ ಪ್ರಕಾರ ಇದನ್ನು ಸರಿಮಾಡುತ್ತೇನೆಂದು ಹೇಳುತ್ತೇನೆ.

೪. ಮುದ್ದೇಬಿಹಾಳ ತಾಲ್ಲೂಕಿನಲ್ಲಿ ವಿಶೇಷ ರೀತಿಯ ರೋಗ ಹರಡಿರುವ ಬಗ್ಗೆ

ಶ್ರೀ ಜಿ. ರಾಜುಗೌಡ (ಹನೂರು) —ಮಾನ್ಯ ಅಧ್ಯಕ್ಷರೇ, ಬಿಜಾಪುರ ಜಿಲ್ಲೆಯ ಮುದ್ದೇಬಿಹಾಳ ತಾಲ್ಲೂಕಿನಲ್ಲಿ ಬಳಗನಾಡು ಗ್ರಾಮದಲ್ಲಿ ಆಶ್ಚರ್ಯಕರವಾದ ರೀತಿಯಲ್ಲಿ ವೃಷಣಬಾತು ರೋಗ ಕಾಣಿಸಿಕೊಂಡಿದೆ. ಈ ರೋಗ ಮೂರು ವರ್ಷಗಳ ಹಿಂದೆ ಕಾಣಿಸಿಕೊಂಡಿದ್ದರೂ, ವೈದ್ಯಕೀಯ ಇಲಾಖೆ ಇದರ ಬಗ್ಗೆ ಗಮನಹರಿಸದೇ ಇರುವುದರಿಂದ, ಈ ರೋಗ ಉಲ್ಬಣಗೊಂಡು ಸುಮಾರು ೧೫೦ ಜನ ಈ ರೋಗದಿಂದ ಬಳಲುತ್ತಿದ್ದಾರೆ. ಇದು ಬಹಳ ತ್ವರಿತವಾಗಿ ಹರಡುತ್ತಿರುವುದರಿಂದ, ಇದಕ್ಕೆ ರಾಜ್ಯದ ಎಲ್ಲಾ ಗಂಡಸರೂ ಬಲಿಯಾಗಬಹುದು ಎಂಬ ಭಯ ಉಂಟಾಗಿದೆ. ಆದ್ದರಿಂದ ಇದನ್ನು ತಡೆಗಟ್ಟಲು ಸೂಕ್ತ ಚಿಕಿತ್ಸೆ ಮಾಡಿಸುವಂತೆ ಮಾನ್ಯ ಆರೋಗ್ಯ ಹಾಗೂ ಕುಟುಂಬ ಕಲ್ಯಾಣ ಮಂತ್ರಿಗಳ ಗಮನ ಸೆಳೆಯುತ್ತೇನೆ.

ಶ್ರೀ ಎಂ. ರಘುಪತಿ (ಶಿಕ್ಷಣ ಸಚಿವರು) (ಮಾನ್ಯ ಆರೋಗ್ಯ ಸಚಿವರ ಪರವಾಗಿ).—ಅಧ್ಯಕ್ಷರೇ, ಇದನ್ನು ಸಂಬಂಧಪಟ್ಟ ಮಂತ್ರಿಗಳ ಗಮನಕ್ಕೆ ಉತ್ತರತಂದು, ಒದಗಿಸುವುದಕ್ಕೆ ಏರ್ಪಾಡು ಮಾಡುತ್ತೇನೆ.

೫. ಅಫಜಲ್‌ಪುರದ ಗ್ರಾಮ ಸಹಾಯಕರಿಗೆ ಹಣ್ಣೊಂದು ತಿಂಗಳಿನಿಂದ ಸಂಬಳ ಕೊಡದಿರುವ ಬಗ್ಗೆ

ಶ್ರೀ ಮಾಲೀಕಯ್ಯ ಗುತ್ತೇದಾರ್ (ಅಫಜಲ್‌ಪುರ್).—ಮಾನ್ಯ ಅಧ್ಯಕ್ಷರೇ, ಗುಲ್ಬರ್ಗಾ ಜಿಲ್ಲೆ ಅಫಜಲ್‌ಪುರ ತಾಲೂಕಿನ ಗ್ರಾಮ ಸಹಾಯಕರಿಗೆ ಕಳೆದ ಹನ್ನೊಂದು ತಿಂಗಳಿಂದ ಸಂಬಳ ನೀಡದಿರುವುದಕ್ಕೆ ಕಾರಣವೇನು ? ಈ ರೀತಿ ಸಂಬಳ ನೀಡದಿದ್ದರಿಂದ ಗ್ರಾಮ ಸಹಾಯಕರಿಗೆ ತಮ್ಮ ಜೀವನ ನಿರ್ವಹಿಸಿಕೊಂಡು ಹೋಗಲು ತೊಂದರೆಯಾಗಿದೆ. ಆದ್ದರಿಂದ ಕೂಡಲೇ ಸರ್ಕಾರದವರು ಕ್ರಮ ಕೈಗೊಂಡು ಅಫಜಲ್‌ಪುರ ತಾಲೂಕಿನ ಗ್ರಾಮ ಸಹಾಯಕರಿಗೆ ಸಂಬಳ ಕೊಡಿಸಬೇಕೆಂದು ಒತ್ತಾಯಿಸಲು ಈ ಸೂಚನೆ ನೀಡುತ್ತಿದ್ದೇನೆ.

ಶ್ರೀ ಎಂ. ರಘುಪತಿ.—ಇದನ್ನು ಸಂಬಂಧಪಟ್ಟ ಮಂತ್ರಿಗಳ ಗಮನಕ್ಕೆ ತಂದು ಉತ್ತರವನ್ನು ಒದಗಿಸಿಕೊಡುತ್ತೇನೆ.

ಅಧ್ಯಕ್ಷರು.—ಶ್ರೀ ಕೆ. ಬಿ. ಕೋಳಿವಾಡ್ ಅವರು ಸಭೆಯಲ್ಲಿಲ್ಲ. ಬಿ. ಸ್ವಾಮಿರಾವ್ ಅವರು ತಮ್ಮ ಸೂಚನೆಯನ್ನು ಓದಬೇಕು.

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ.—ಮಾನ್ಯ ಗುತ್ತೇದಾರ್ ಅವರು ಹೇಳಿದುದನ್ನು ಸೀರಿಯಸ್ಸಾಗಿ ತೆಗೆದುಕೊಳ್ಳಬೇಕು. ರೆವೆನ್ಯೂ ಡಿಪಾರ್ಟ್‌ಮೆಂಟ್‌ಗೆ ಹಣ ರಿಲೀಸ್ ಮಾಡಿದ್ದೇವೆಂದು ಹೇಳಿದರು. ಇದುವರೆಗೂ ರಿಲೀಸ್ ಮಾಡಿಲ್ಲ, ೧೧ ತಿಂಗಳು ಆಯಿತು.

ಶ್ರೀ ಎಂ. ರಘುಪತಿ.—ನೋಟ್ ಮಾಡಿಕೊಂಡು, ಸಂಬಂಧಪಟ್ಟ ಮಂತ್ರಿಗಳಿಗೆ ತಿಳಿಸಿ ಉತ್ತರ ತರಿಸಿಕೊಡಲಾಗುವುದು.

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ.—ಸಂಬಂಧಪಟ್ಟ ಮಂತ್ರಿಗಳ ಹತ್ತಿರ ಮಾತಾಡಿದ್ದೂ ಆಯಿತು. ಇನ್ನೂ ಬಂದಿಲ್ಲ.

ಅಧ್ಯಕ್ಷರು.—ಉತ್ತರವನ್ನು ತರಿಸಿಕೊಡುತ್ತೇನೆ.